ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 04–10–2017

## ಪತ್ರಿಕಾ ಆಮಂತ್ರಣ

1. ರಾಜ್ಯಮಟ್ಟದ ಶ್ರೀ ಮಹಿರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ – ಶ್ರೀ ಮಹರ್ಷಿ ಪ್ರತಿಮೆ ಅನಾವರಣ ಹಾಗೂ ತಪೋವನ ಉದ್ಘಾಟನೆ:

   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

   ದಿನಾಂಕ: 05–10–2017, ಗುರುವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ
   ಸ್ಥಳ: "ವಾಲ್ಮೀಕಿ ತಪೋವನ" ಶಾಸಕರ ಭವನದ ಮುಂಭಾಗ.

2. ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ :
   ಉದ್ಘಾಟನೆ:
   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.
   ಅಧ್ಯಕ್ಷತೆ:
   ಹೆಚ್. ಆಂಜನೇಯ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು.
   ದಿನಾಂಕ: 05–10–2017, ಗುರುವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ
   ಸ್ಥಳ: ವಿಧಾನಸೌಧದ ಪೂರ್ವದ್ವಾರದ ಮುಂಭಾಗ, ಬೆಂಗಳೂರು

3. ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಪುಸ್ತಕಗಳ ಬಿಡುಗಡೆ ಹಾಗೂ ಬ್ರೈಲ್ ಲಿಪಿ ಪುಸ್ತಕಗಳ ವಿತರಣೆ ಸಮಾರಂಭ:
   ಪುಸ್ತಕಗಳ ಬಿಡುಗಡೆ ಹಾಗೂ ಬ್ರೈಲ್ ಲಿಪಿ ಪುಸ್ತಕಗಳ ವಿತರಣೆ:
   ಪ್ರೊ. ಎಸ್.ಜಿ. ಸಿದ್ಧರಾಮಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.

   ಅಧ್ಯಕ್ಷತೆ:
   ಡಾ. ವಸುಂಧರಾ ಭೂಪತಿ, ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ.

   ದಿನಾಂಕ: 6–10–2017, ಶುಕ್ರವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

4. 64ನೇ ಅಖಿಲ ಭಾರತ ಸಹಕಾರ ಸಪ್ತಾಹ ಪೂರ್ವಭಾವಿ ಸಭೆ:
ಅಧ್ಯಕ್ಷತೆ:
ರಮೇಶ ಲ. ಜಾರಕಿಹೊಳಿ, ಸಹಕಾರ ಸಚಿವರು.
ದಿನಾಂಕ: 6-10-2017, ಶುಕ್ರವಾರ ಸಮಯ: ಬೆಳಿಗ್ಗೆ 11.30 ಗಂಟೆಗೆ.
ಸ್ಥಳ: ಕೊಠಡಿ ಸಂಖ್ಯೆ 419, ಸಮ್ಮೇಳನ ಸಭಾಂಗಣ, ನಾಲ್ಕನೇ ಮಹಡಿ, ವಿಕಾಸಸೌಧ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

**ಸಂಖ್ಯೆ:145/265**

## ಬೆಂಗಳೂರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಶೈಕ್ಷಣಿಕ ಪ್ರಾರಂಭೋತ್ಸವಕ್ಕೆ ಚಾಲನೆ

## ಆರ್ಥಿಕ ಶಿಸ್ತು ಕಾಯ್ದುಕೊಂಡ ಕರ್ನಾಟಕ: ಡಾ. ಮನ್‌ಮೋಹನ್ ಸಿಂಗ್ ಮೆಚ್ಚುಗೆ

ಬೆಂಗಳೂರು, ಅಕ್ಟೋಬರ್ 04 ( ಕರ್ನಾಟಕ ವಾರ್ತೆ) :

ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ಕಾರ್ಯಕ್ರಮಗಳನ್ನು ರೂಪಿಸುವುದರ ಜೊತೆಗೆ ಆರ್ಥಿಕ ಶಿಸ್ತನ್ನು ಕಾಯ್ದುಕೊಂಡಿರುವ ರಾಜ್ಯದ ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭಾರತದ ಮಾಜಿ ಪ್ರಧಾನಿ ಹಾಗೂ ಆರ್ಥಿಕ ತಜ್ಞ ಡಾ: ಮನ್‌ಮೋಹನ್‌ಸಿಂಗ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಇಂದು ನಗರದ ಅಂಬೇಡ್ಕರ್ ಭವನದಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಶೈಕ್ಷಣಿಕ ಪ್ರಾರಂಭೋತ್ಸವದ ಉದ್ಘಾಟಿಸಿ ಮಾತನಾಡಿದರು. 12 ಆಯವ್ಯಯಗಳನ್ನು ಸಿದ್ದಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 8165 ಕೋಟಿ ರೂ.ಗಳಷ್ಟು ರೈತರ ಸಾಲ ಮನ್ನಾ ಮಾಡಿದ ನಂತರವೂ ರಾಜ್ಯದಲ್ಲಿ ಉತ್ತಮ ಆರ್ಥಿಕಸ್ಥಿತಿಯನ್ನು ಕಾಯ್ದುಕೊಂಡಿದ್ದಾರೆ. ಯು.ಪಿ.ಎ. ಸರ್ಕಾರದ ಆಹಾರ ಭದ್ರತಾ ಕಾಯ್ದೆಯನ್ನು ಯಶಸ್ವಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿಸಿದ್ದಾರೆ. ಇಂತಹ ಸಾಮಾಜಿಕ ಕಳಕಳಿಯ ಯೋಜನೆಯನ್ನು ಜಾರಿಗೊಳಿಸುವುರೊಂದಿಗೆ ಆರ್ಥಿಕ ಶಿಸ್ತನ್ನು ಕಾಯ್ದುಕೊಂಡಿದ್ದಾರೆ. ಕರ್ನಾಟಕ ರಾಜ್ಯವು ಆರ್ಥಿಕ ಶಿಸ್ತನ್ನು ಕಾಯ್ದುಕೊಂಡಿರುವ ಅತ್ಯುತ್ತಮ

ರಾಜ್ಯಗಳಲ್ಲಿ ಒಂದು ಎಂದು ಬಣ್ಣಿಸಿದ ಅವರು ಇದಕ್ಕಾಗಿ ಮುಖ್ಯಮಂತ್ರಿಯವರನ್ನು ಅಭಿನಂದಿಸಿದರು.

ದೇಶದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಅಸಮಾನತೆ ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು ಯೋಜನಾ ಆಯೋಗವನ್ನು ರದ್ದುಪಡಿಸಿರುವ ಹಿನ್ನೆಲೆಯಲ್ಲಿ ಅಸಮಾನತೆಯನ್ನು ನಿಯಂತ್ರಣಕ್ಕೆ ತರಲು ಹೊಸ ಪ್ರಯತ್ನಗಳ ಅಗತ್ಯವಿದೆ. ಹೊಸ ರೂಪದ ಸಾಮಾಜಿಕ, ಆರ್ಥಿಕ ನೀತಿಯನ್ನು ರೂಪಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಉನ್ನತ ಶಿಕ್ಷಣಕ್ಕೆ ಹೆಸರುವಾಸಿಯಾದ ಬೆಂಗಳೂರಿನಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಭವಿಷ್ಯದಲ್ಲಿ ದೇಶದ ಅತ್ಯುತ್ತಮ ದರ್ಜೆಯ ಶಿಕ್ಷಣ ಸಂಸ್ಥೆಯಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ ದೇಶದ ಜ್ಞಾನಾರ್ಜನೆಯ ರಾಜಧಾನಿ ಎಂದೇ ಗುರುತಿಸಿಕೊಂಡಿರುವ ಬೆಂಗಳೂರಿನಲ್ಲಿ ಅತ್ಯುತ್ತಮ ಉನ್ನತ ಶಿಕ್ಷಣ ಸಂಸ್ಥೆಗಳು ನೆಲೆಸಿವೆ. ಈ ಸಂಸ್ಥೆಗಳ ಪಟ್ಟಿಗೆ ಬೆಂಗಳೂರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಒಂದು ಮೌಲ್ಯಯುತ ಸೇರ್ಪಡೆಯಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂಸ್ಥೆಯು ಥಿಯರಿಟಿಕಲ್ ಮತ್ತು ಅಪ್ಲೈಡ್ ವಿಷಯಗಳೊಂದಿಗೆ ಇತರ ಸಮಾಜ ಶಾಸ್ತ್ರದ ವಿಷಯಗಳ ಬೋಧನೆ ಹಾಗೂ ಸಂಶೋಧನೆಗೆ ಒತ್ತು ನೀಡುವುದರೊಂದಿಗೆ ಯುವ ಅರ್ಥಶಾಸ್ತ್ರಜ್ಞರಿಗೆ ಉನ್ನತ ಗುಣಮಟ್ಟದ ಸಂಶೋಧನೆ ಕೈಗೊಳ್ಳಲು ಹೆಚ್ಚಿನ ಅವಕಾಶ ಒದಗಿಸಲಿದೆ ಎಂದು ನುಡಿದರು.

ತಾವು ದಾಖಲೆ 12 ಬಾರಿ ಆಯವ್ಯಯ ಮಂಡಿಸಿರುವ ಕುರಿತು ಮಾತನಾಡಿದ ಮುಖ್ಯಮಂತ್ರಿ ಅವರು ನನ್ನ ಪ್ರತಿ ಆಯವ್ಯಯ ಎಲ್ಲರನ್ನು ಒಳಗೊಂಡ ಅಭಿವೃದ್ಧಿಯ ನಿಟ್ಟಿನಲ್ಲಿ ವಿಶೇಷ ಪ್ರಯತ್ನವಾಗಿದೆ. ಒಬ್ಬ ಸಾಮಾನ್ಯ ಮನುಷ್ಯನಾಗಿ ನನ್ನ ಅನುಭವದ ಹಿನ್ನೆಲೆಯಲ್ಲಿ ಆದ್ಯತೆಗಳನ್ನು ಉತ್ತಮವಾಗಿ ಗುರುತಿಸಿದ್ದೇನೆ. ಶಿಕ್ಷಣ ನನ್ನ ಆದ್ಯತೆಯ ಕ್ಷೇತ್ರಗಳಲ್ಲಿ ಒಂದಾಗಿದೆ. ಈ ಕಾರಣಕ್ಕಾಗಿಯೇ ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಸ್ಥಾಪನೆಗೆ ಆಯವ್ಯದಲ್ಲಿ 200 ಕೋಟಿ ರೂ. ಒದಗಿಸಿದ್ದೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿದ್ದ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಮಾಜಿ ಗವರ್ನರ್ ಹಾಗೂ ಮದ್ರಾಸ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ ಡಾ: ಸಿ. ರಂಗರಾಜನ್ ಅವರು ಮಾತನಾಡಿ ದೇಶದಲ್ಲಿ ಕುಸಿಯುತ್ತಿರುವ ಆರ್ಥಿಕತೆಗೆ ನೆನೆಗುದ್ದಿಗೆ ಬಿದ್ದಿರುವ ಯೋಜನೆಗಳ ತ್ವರಿತ ಅನುಷ್ಠಾನ, ಸಾಲ ನೀತಿಯನ್ನು ಚುರುಕುಗೊಳಿಸುವುದು ಹಾಗೂ ಉದ್ಯಮಿಗಳೊಂದಿಗೆ ಸಮಸ್ಯೆಗಳ ಕುರಿತು ಚರ್ಚಿಸುವ ಮೂಲಕ ಪರಿಹಾರ

ಕಂಡುಕೊಳ್ಳಬೇಕಾಗಿದೆ. ಹೂಡಿಕೆಗೆ ಸೂಕ್ತ ವಾತಾವರಣ ನಿರ್ಮಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ(BASE) ನಲ್ಲಿ ಅರ್ಥಶಾಸ್ತ್ರದ ಜೊತೆಗೆ ಗಣಿತಶಾಸ್ತ್ರ ಹಾಗೂ ಸಂಖ್ಯಾಶಾಸ್ತ್ರವನ್ನು ಭೋಧಿಸುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ದಕ್ಷಿಣ ಭಾರತದಲ್ಲಿ ಅರ್ಥಶಾಸ್ತ್ರದೊಂದಿಗೆ ಈ ವಿಷಯಗಳನ್ನು ಕಲಿಸದಿರುವ ಕಾರಣ ಸ್ನಾತಕೋತ್ತರ ಹಂತದಲ್ಲಿ ವಿದ್ಯಾರ್ಥಿಗಳಿಗೆ ಅರ್ಥಶಾಸ್ತ್ರದ ಸಿದ್ದಾಂತಗಳನ್ನು ಕಷ್ಟಕರವಾಗುತ್ತಿದೆ ಎಂದು ನುಡಿದರು. ಅರ್ಥಶಾಸ್ತ್ರದ ಸಿದ್ದಾಂತಗಳನ್ನು ಸ್ಥಳೀಯ ಹಾಗೂ ಜಾಗತಿಕ ಮಟ್ಟದಲ್ಲಿ ಆರ್ಥಿಕ ಸಮಸ್ಯೆಗಳನ್ನು ಪರಿಹರಿಸಲು ಬಳಸಬೇಕು. ಈ ನಿಟ್ಟಿನಲ್ಲಿ ಈ ಸಂಸ್ಥೆಯು ಅತ್ಯುನ್ನತ ಕೊಡುಗೆ ನೀಡುವುದು ಎಂದು ಅವರು ಆಶಿಸಿದರು.

ಭಾರತದಲ್ಲಿ ಉನ್ನತ ಶಿಕ್ಷಣವು ಕವಲು ಹಾದಿಯಲ್ಲಿದೆ. ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದೆ. ಈ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಬೇಕು. ಜೊತೆಗೆ ಸಮಾಜದಲ್ಲಿ ನಿರ್ಲಕ್ಷ್ಯಕ್ಕೊಳಗಾದ ವರ್ಗದವರಿಗೂ ಉತ್ತಮ ಶಿಕ್ಷಣ ದೊರೆಯಬೇಕು. ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಪಠ್ಯಗಳು ಕಾಲಕ್ಕೆ ತಕ್ಕಂತೆ ಬದಲಾಗಬೇಕು. ನೆನಪು ಶಕ್ತಿಯನ್ನು ಆಧರಿಸಿದ ಮೌಲ್ಯಮಾಪನದ ಬದಲು ವಿಶ್ಲೇಷಣೆಯನ್ನು ಆಧರಿಸಿದ ಮೌಲ್ಯಮಾಪನ ಜಾರಿಗೆ ಬರಬೇಕು ಎಂದು ನುಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್‌ನ(BASE) ಇಂದು 50 ವಿದ್ಯಾರ್ಥಿಗಳೊಂದಿಗೆ ಶೈಕ್ಷಣಿಕ ಚಟುವಟಿಕೆ ಆರಂಭಿಸಿದೆ. ಇದರಲ್ಲಿ ಶೇ. 60 ರಷ್ಟು ವಿದ್ಯಾರ್ಥಿಗಳು ಕರ್ನಾಟಕದವರು ಎನ್ನುವುದು ಸಂತಸದ ವಿಚಾರ. ರಾಜ್ಯದಲ್ಲಿ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು ಸಾಮಾನ್ಯ ದಾಖಲಾತಿ ಪ್ರಮಾಣ ಕಡಿಮೆ ಇರುವ ಜಿಲ್ಲೆಗಳಲ್ಲಿ ವಸತಿಯುತ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿದೆ. ರಾಜ್ಯದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ರಾಜ್ಯದ ಸಾಮಾನ್ಯ ದಾಖಲಾತಿ ಪ್ರಮಾಣವು (ಜಿ.ಇ.ಆರ್.) 28 ಆಗಿದ್ದು ಇದು ದೇಶದ ಒಟ್ಟಾರೆ ಸರಾಸರಿಗಿಂತ ಹೆಚ್ಚಾಗಿದೆ. ಮುಂದಿನ ದಿನಗಳಲ್ಲಿ ಇದನ್ನು 40 ಕ್ಕೆ ಏರಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಸಂಸ್ಥೆಯ ನಿರ್ದೇಶಕ ಆರ್.ಎಸ್. ದೇಶಪಾಂಡೆ ಸ್ವಾಗತಿಸಿದರು. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಬಿ. ದ್ಯಾಬೇರಿ ವಂದಿಸಿದರು.

ಸಮಾರಂಭದಲ್ಲಿ ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್‌ಬೇಗ್, ಬೃಹತ್ ಮತ್ತು ಮದ್ಯಮ ಕೈಗಾರಿಕಾ ಸಚಿವ ಆರ್.ವಿ. ದೇಶಪಾಂಡೆ, ಲೋಕೋಪಯೋಗಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್, ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಗೃಹ ಸಚಿವ ರಾಮಲಿಂಗಾರೆಡ್ಡಿ, ಕಾನೂನು ಸಚಿವ ಟಿ.ಬಿ. ಜಯಚಂದ್ರ, ಸಾರಿಗೆ ಸಚಿವ ಹೆಚ್.ಎಂ. ರೇವಣ್ಣ, ಕೆ.ಪಿ.ಸಿ.ಸಿ. ಅಧ್ಯಕ್ಷ ಡಾ; ಜಿ. ಪರಮೇಶ್ವರ, ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್‌ಚಂದ್ರ ಕುಂಠಿಆ ಮೊದಲಾದವರು ಹಾಜರಿದ್ದರು.

## ಮಾಜಿ ಸಚಿವ ತಿಪ್ಪೇಸ್ವಾಮಿ ಅವರಿಗೆ ಮಹರ್ಷಿ ವಾಲ್ಮೀಕಿ ಪ್ರಶಸ್ತಿ

**ಸಂಖ್ಯೆ:146/266**

ಬೆಂಗಳೂರು, ಅಕ್ಟೋಬರ್ 04 ( ಕರ್ನಾಟಕ ವಾರ್ತೆ) :

ಪ್ರಸಕ್ತ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಯನ್ನು ಚಳ್ಳಕೆರೆಯ ಮಾಜಿ ಸಚಿವ ಶ್ರೀ ತಿಪ್ಪೇಸ್ವಾಮಿ ಅವರಿಗೆ ನೀಡಲಾಗಿದೆ ಎಂದು ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷೆ ಪ್ರೊ. ಸುಕನ್ಯಾ ಮಾರುತಿ ಅವರು ಘೋಷಿಸಿದರು.

ಅವರು ಇಂದು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಲಾಗಿದ್ದು ಪತ್ರಿಕಾ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಪ್ರಶಸ್ತಿ ಮೊತ್ತ 5.00 ಲಕ್ಷ ರೂ.ಗಳಾಗಿದ್ದು ಪ್ರಶಸ್ತಿ ಕೋರಿ 26 ಅರ್ಜಿಗಳು ಬಂದಿದ್ದವು. 26 ಅರ್ಜಿಗಳಲ್ಲಿ ಎರಡು ಅರ್ಜಿಗಳು ವಯೋಮಾನದ ಕಾರಣದಿಂದ ತಿರಸ್ಕರಿಸಲಾಯಿತು ಎಂದ ಅವರು ಇನ್ನೂಳಿದ 24 ಅರ್ಜಿಗಳಲ್ಲಿ ಅವರ ಅನುಭವ, ಸಾಧನೆ, ಬುಡಕಟ್ಟು ಜನರ ಸೇವೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಯನ್ನು ಆಧರಿಸಿ ಮಾಜಿ ಸಚಿವ ತಿಪ್ಪೇಸ್ವಾಮಿ ಅವರನ್ನು ಸಮಿತಿಯು ಸರ್ವಾನುಮತದಿಂದ ಆಯ್ಕೆಮಾಡಲಾಯಿತು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಈ ಬಾರಿ ವೈಶಿಷ್ಟ್ಯಪೂರ್ಣವಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದರು. ಪ್ರತಿ ವರ್ಷ ವಾಲ್ಮೀಕಿ ಅವರ ಹೆಸರಿನಲ್ಲಿ ಪ್ರಶಸ್ತಿಯನ್ನು ಸರ್ಕಾರ ನೀಡುತ್ತಾ ಬಂದಿದೆ. ಈ ಬಾರಿ ಅಕ್ಟೋಬರ್ 5 ರಂದು ನಡೆಯುವ ರಾಜ್ಯಮಟ್ಟದ ವಾಲ್ಮೀಕಿ ಜಯಂತಿ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪುರಸ್ಕೃತರಿಗೆ 5.00 ಲಕ್ಷ ರೂ. ಹಾಗೂ ಫಲಕ ನೀಡಿ ಸನ್ಮಾನಿಸಲಿದ್ದಾರೆ ಎಂದರು. ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಎನ್. ಲಕ್ಷ್ಮೀನಾರಾಯಣ ಮತ್ತು ಇಲಾಖೆಯ ಸಲಹೆಗಾರರಾದ ಇ. ವೆಂಕಟಯ್ಯ ಸೇರಿದಂತೆ ಆಯ್ಕೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ.

**ಸಂಖ್ಯೆ:147/267**

# ಮೂಲ ದಾಖಲಾತಿ ಪರಿಶೀಲನೆ

**ಬೆಂಗಳೂರು, ಅಕ್ಟೋಬರ್ 04 ( ಕರ್ನಾಟಕ ವಾರ್ತೆ) :**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷ ನೇಮಕಾತಿ ಸಮಿತಿಯಿಂದ ವಿವಿಧ ಅರೆ-ವೈದ್ಯಕೀಯ ಹುದ್ದೆಗಳಿಗೆ ಶುಶ್ರೂಷಕರ ಹುದ್ದೆಗಳನ್ನು ಹೊರತುಪಡಿಸಿ ಆಲ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನೆಯನ್ನು ಅಕ್ಟೋಬರ್ 9 ರಿಂದ 14 ರವರೆಗೆ ನಡೆಸಲಾಗುತ್ತಿದ್ದು, ಸೂಚನಾ ಪತ್ರ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಕಟ್‌ಆಫ್ ಪರ್ಸೆಂಟೇಜ್ ಹಾಗೂ ಹೆಚ್ಚಿನ ವಿವರಗಳಿಗಾಗಿ ಇಲಾಖೆ ವೆಬ್‌ಸೈಟ್ **www.karthfw.gov.in** ಅನ್ನು ವೀಕ್ಷಿಸಬಹುದಾಗಿದೆ.

**ಸಂಖ್ಯೆ:148/268**

# ORIGINAL DOCUMENT VERIFICATION

**Bengaluru, Oct 4 (Karnataka Information)**

**In Pursuant of the Notification No. SRC/01/2017-18 Dated 30-5-2017, the original document verification for the Para-Medical post except Staff Nurses post is to be held from 9-10-2017 to 14-10-2017, for downloading Call letter, Cut-Off percentage and further details visit www.karthfw.gov.in.**

**ಸಂಖ್ಯೆ:149/269**

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಅಕ್ಟೋಬರ್ 04 ( ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕಸೇವಾ ಆಯೋಗ 24-8-2016 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಪೊಲೀಸ್ ಇಲಾಖೆಯ ನ್ಯಾಯ ವಿಜ್ಞಾನಿಕ ಅಧಿಕಾರಿ (ಮನೋವಿಜ್ಞಾನ ವಿಭಾಗ) 06-+01 (ಹೈ.ಕ.)

ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಇಂದು ಆಯೋಗದ ಅಂತರ್ಜಾಲದಲ್ಲಿ "**http://kpsc.kar.nic.in/Selection List**" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ದಿನಾಂಕ 10–10–2017 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು –560 001 ಇವರಿಗೆ ಸಲ್ಲಿಸಬಹುದೆಂದು ಆಯೋಗದ ಪ್ರಕಟಣೆ ತಿಳಿಸಿದೆ.